**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 182 ಗ್ರಾನೀಸ (4)2015

2ನೇ ಮಹಡಿ, 'E' Block,
K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-09, ದಿನಾಂಕ:07.12.2015

**ಇವರಿಂದ :**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,

ಅತಿ ಪ್ರಾಮುಖ್ಯವಾದುದು

**ಇವರಿಗೆ :**
ರಾಜ್ಯದ ಎಲ್ಲಾ (30) ಕಾರ್ಯಪಾಲಕ ಅಭಿಯಂತರರು,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು.

ಮಾನ್ಯರೆ,

ವಿಷಯ: ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕುಡಿಯುವ ನೀರಿನ ಕೊಳವೆ ಬಾವಿಗಳಿಗೆ ಮರುಪೂರಣ ಕಾಮಗಾರಿಗಳನ್ನು ರಾಜ್ಯಾದ್ಯಂತ ಬೃಹತ್ ಪ್ರಮಾಣದಲ್ಲಿ ಕೈಗೊಳ್ಳುತ್ತಿದ್ದು, ಸದರಿ ಕಾಮಗಾರಿಗಳು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ಪುನರಾವರ್ತನೆ (Duplicate) ಆಗದ ಹಾಗೆ ಕ್ರಮವಹಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆರವರ ಪತ್ರ ಸಂಖ್ಯೆ:ಗ್ರಾಅಪ 538 ಉಖಾಯೋ 2014, ದಿನಾಂಕ:13.11.2015.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕುಡಿಯುವ ನೀರಿನ ಕೊಳವೆ ಬಾವಿಗಳಿಗೆ ಮರುಪೂರಣ ಕಾಮಗಾರಿಗಳನ್ನು ರಾಜ್ಯಾದ್ಯಂತ ಬೃಹತ್ ಪ್ರಮಾಣದಲ್ಲಿ ಕೈಗೊಳ್ಳುತ್ತಿದ್ದು, ಸದರಿ ಕಾಮಗಾರಿಗಳು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ಪುನರಾವರ್ತನೆ (Duplicate) ಆಗದ ಹಾಗೆ ಕ್ರಮವಹಿಸಲು ಕೋರಿರುತ್ತಾರೆ. ಅದರಂತೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನಗೊಳಿಸಲಾಗುವ ಕೊಳವೆ ಬಾವಿಗಳ ಮರುಪೂರಣ ಕಾಮಗಾರಿಗಳು ಇತರೆ ಯಾವುದೇ ಯೋಜನೆಯಡಿ ಪುನರಾವರ್ತನೆಯಾಗದಂತೆ ಎಚ್ಚರಿಕೆ ವಹಿಸಲು ಮತ್ತು ತಮ್ಮ ಅಧೀನ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.

ತಮ್ಮ ವಿಶ್ವಾಸಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**ದೂರವಾಣಿ & ಫ್ಯಾಕ್ಸ್ 22233175**
ಇ-ಮೇಲ್:ddrwsrdpr@gmail.com

ಪ್ರತಿಯನ್ನು:

1. ರಾಜ್ಯದ ಎಲ್ಲಾ ಜಿಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಜರೂರು ಕ್ರಮಕ್ಕಾಗಿ ಕೋರಿ ಸಲ್ಲಿಸಿದೆ.
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09ರವರ ಮಾಹಿತಿಗಾಗಿ ಮತ್ತು ಮುಂದಿನ ಜರೂರು ಕ್ರಮಕ್ಕಾಗಿ ಕೋರಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ(8) ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳುರವರುಗಳ ಮಾಹಿತಿಗಾಗಿ ಮತ್ತು ಜರೂರು ಕ್ರಮಕ್ಕಾಗಿ ಕೋರಿ ಕಳುಹಿಸಿದೆ.
4. ರಾಜ್ಯದ ಎಲ್ಲಾ (176) ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿರವರುಗಳ ಮಾಹಿತಿಗಾಗಿ ಮತ್ತು ಸೂಕ್ತ ಜರೂರು ಕ್ರಮಕ್ಕಾಗಿ ಕಳುಹಿಸಿದೆ.

LD